ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 07–09–2018**

# ಪತ್ರಿಕಾ ಆಮಂತ್ರಣ

1.ಪೊಲೀಸ್ ಪಬ್ಲಿಕ್ ಶಾಲೆಯ ವತಿಯಿಂದ ನೂತನವಾಗಿ ನಿರ್ಮಿಸಿರುವ ಡಾ. ಎಸ್. ರಾಧಾಕೃಷ್ಣ ಬ್ಲಾಕ್ ಉದ್ಘಾಟನೆ ಸಮಾರಂಭ:

ಉದ್ಘಾಟನೆ:

ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು

ದಿನಾಂಕ: 09–09–2018, ಭಾನುವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ
ಸ್ಥಳ: ಶಾಲೆಯ ಆವರಣ, ಪೊಲೀಸ್ ಪಬ್ಲಿಕ್ ಸ್ಕೂಲ್, 3 ನೇ ಪಡೆ ಕೆ.ಎಸ್.ಆರ್.ಪಿ. ಆವರಣ, ಕೋರಮಂಗಲ, ಬೆಂಗಳೂರು

2.ಕಾರಾಗೃಹ ಇಲಾಖೆ:
ಸನ್ನಡತೆಯ ಬಂಧಿಗಳ ಅವಧಿ ಪೂರ್ವ ಬಿಡುಗಡೆ ಕಾರ್ಯಕ್ರಮ

**ಮುಖ್ಯ ಅತಿಥಿಗಳು:**
ಡಾ. ಜಿ. ಪರಮೇಶ್ವರ, ಉಪ ಮುಖ್ಯಮಂತ್ರಿಗಳು

**ವಿಶೇಷ ಅತಿಥಿಗಳು:**
ಡಿ.ಕೆ. ಸುರೇಶ್, ಲೋಕಸಭಾ ಸದಸ್ಯರು, ಬೆಂಗಳೂರು ಗ್ರಾಮಾಂತರ

**ಅಧ್ಯಕ್ಷತೆ:**
ಎಂ. ಕೃಷ್ಣಪ್ಪ, ಶಾಸಕರು, ಬೆಂಗಳೂರು ದಕ್ಷಿಣ, ಬೆಂಗಳೂರು.

ದಿನಾಂಕ: 09.09.2018, ಭಾನುವಾರ, ಸಮಯ–ಬೆಳಗ್ಗೆ 11.30
ಸ್ಥಳ–ಕೇಂದ್ರ ಕಾರಾಗೃಹದ ಆವರಣ, ಪರಪ್ಪನ ಅಗ್ರಹಾರ, ಬೆಂಗಳೂರು.

**<u>ಸೂಚನೆ</u>: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 9.00 ಗಂಟೆಗೆ ನಗರದ ಕಬ್ಬನ್ ಉದ್ಯಾನವನದ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.**

*ಸಂಪರ್ಕ: ಶ್ರೀ ಎಸ್.ಡಿ. ಗಲ್ಲೇ, ಜೈಲರ್*
*ದೂರವಾಣಿ ಸಂಖ್ಯೆ: 8660569537, 9611528825.*

3. ಪತ್ರಿಕಾಗೋಷ್ಠಿ:

ಆರ್.ವಿ. ದೇಶಪಾಂಡೆ
ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

ದಿನಾಂಕ: 10-09-2018 ಸೋಮವಾರ ಸಮಯ: ಅಪರಾಹ್ನ 12-30 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 222, ವಿಕಾಸ ಸೌಧ, ಬೆಂಗಳೂರು

**ಸಂಖ್ಯೆ: 962/1062**

## <u>ಪತ್ರಿಕಾ ಪ್ರಕಟಣೆ</u>

### ಬೆಂಗಳೂರು ಜಲಮಂಡಲಿ : ಸೆಪ್ಟೆಂಬರ್ 07 ರಂದು ಪೂರ್ವ-1 ಉಪವಿಭಾಗದಲ್ಲಿ ನೀರಿನ ಅದಾಲತ್

**ಬೆಂಗಳೂರು, ಸೆಪ್ಟೆಂಬರ್ 6 (ಕರ್ನಾಟಕ ವಾರ್ತೆ) :**

**ಬೆಂಗಳೂರು ಜಲಮಂಡಲಿಯ (ಪೂರ್ವ-1) ಉಪವಿಭಾಗದಲ್ಲಿ ದಿ:07.09.2018 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.**

**ದಿನಾಂಕ: 07.09.2018 ರಂದು (ಪೂರ್ವ-1) ಉಪವಿಭಾಗ ವ್ಯಾಪ್ತಿಗೆ ಬರುವ ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಓ.ಎಂ.ಬಿ.ಆರ್ ಲೇಔಟ್, ಮತ್ತು**

ಹೆಚ್.ಬಿ.ಆರ್ ಲೇಔಟ್ ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು 1ನೇ ಬ್ಲಾಕ್, ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ಪೂರ್ವ)22945158. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಪೂರ್ವ–1) ಉಪವಿಭಾಗ–22945170.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ–22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ–8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ: 963/1063

## BWSSB:Water Adalath in East-1 sub division on September 7th

Bengaluru, September 7 (Karnataka Information) :

BWSSB water Adalath is held on 07.09.2018 in (East-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of HRBR Layout, Kalyan Nagar, OMBR Layout, & HBR layout, service station coming under (East-1) sub division, will be discussed in detail & problems will be settled in the office of the Assistant Executive Engineer (East-1) sub division, 1st Block, HRBR Layout, Kalyan Nagar.

Details regarding the adalath can be obtained by the office of EE(East): 22945158, or office of AEE (East-1): 22945170.

For any problems regarding the water supply and all, publics can contact 24x7 call centre :22238888 helpline number:1916 & whats app no: 8762228888. Public can utilize this adalath facilities to solve the problems regarding water supply says official press release.

**ಸಂಖ್ಯೆ: 964/1064**

# ಎಸಿಬಿ ದಾಳಿ

**ಬೆಂಗಳೂರು, ಸೆಪ್ಟೆಂಬರ್ 6 (ಕರ್ನಾಟಕ ವಾರ್ತೆ) :**

**ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕು ಮಂಚೇನಹಳ್ಳಿ ಗ್ರಾಮದ ನಿವಾಸಿಯೊಬ್ಬರು ತಮ್ಮ ಮನೆಗೆ ವಿದ್ಯುತ್ ಸಂಪರ್ಕ ನೀಡಿ ಮೀಟರ್ ಅಳವಡಿಸಲು ಕೋರಿರುತ್ತಾರೆ. ಶ್ರೀ.ಕೃಷ್ಣಂರಾಜು, ಬಿಲ್ ಕಲೆಕ್ಟರ್, ಬೆಸ್ಕಾಂ, ಮಂಚೇನಹಳ್ಳಿ, ಗೌರಿಬಿದನೂರು ತಾಲ್ಲೂಕು ರವರು ಫಿರ್ಯಾದಿದಾರರಿಗೆ ವಿದ್ಯುತ್ ಸಂಪರ್ಕ ನೀಡಿ ಮೀಟರ್ ಅಳವಡಿಸಲು ರೂ.11,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.**

**ದಿನಾಂಕ; 06.09.2018 ರಂದು ಶ್ರೀ.ಕೃಷ್ಣಂರಾಜು, ಬಿಲ್ ಕಲೆಕ್ಟರ್, ಬೆಸ್ಕಾಂ, ಮಂಚೇನಹಳ್ಳಿ, ಗೌರಿಬಿದನೂರು ತಾಲ್ಲೂಕು ರವರು ಫಿರ್ಯಾದುದಾರರಿಂದ ರೂ.10,000/- ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಆರೋಪಿತರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

**ಸಂಖ್ಯೆ: 965/1065**

# ACB Raid

Bengaluru, September 7 (Karnataka Information) :

A resident of Manchenahalli Village Gowribidanuru Taluk had sought for a New Power connection & Meter for his house. Sri.Krishnamraju, Bill

Collector, Bescom, Manchenahalli village, Gowribidanuru Taluk had demanded a bribe amount Rs.11,000/- from the complainant to do the same.

On 06.09.2018 the officials of ACB PS Chikkaballapur have trapped & arrested Sri.Krishnamraju, Bill Collector while accepting bribe amount of Rs.10,000/- from the complainant. The bribe amount has been seized. The case is under Investigation.

**ಸಂಖ್ಯೆ: 966/1066**

# ಎಸಿಬಿ ದಾಳಿ

ಬೆಂಗಳೂರು, ಸೆಪ್ಟೆಂಬರ್ 6 (ಕರ್ನಾಟಕ ವಾರ್ತೆ) :

ಬೀದರ ತಾಲ್ಲೂಕು ಶ್ರೀಮಂಡಲ ಗ್ರಾಮದ ನಿವಾಸಿಯೊಬ್ಬರು ತಮ್ಮ ತಾಯಿಯ ಹೆಸರಿನಲ್ಲಿರುವ ಜಮೀನು ಸರ್ವೆ ಕುರಿತು ಬೀದರ ಭೂ ಮಾಪನ ಶಾಖೆಗೆ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಜಮೀನು ಸರ್ವೆ ಮಾಡಿ ದಾಖಲಾತಿಗಳನ್ನು ನೀಡಲು ಶ್ರೀ.ಸಿದ್ದರಾಜು, ಪರವಾನಗಿ ಭೂ ಮಾಪಕರು, ಭೂ ಮಾಪನ ಶಾಖೆ, ತಹಸೀಲ್ದಾರ ಕಛೇರಿ, ಬೀದರ ರವರು ರೂ.25,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ; 06.09.2018 ರಂದು ಶ್ರೀ ಸಿದ್ದರಾಜು, ಪರವಾನಗಿ ಭೂ ಮಾಪಕರು, ಭೂ ಮಾಪನ ಶಾಖೆ, ಬೀದರ ರವರು ಫಿರ್ಯಾದುದಾರರಿಂದ ರೂ.25,000/- ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಬೀದರ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಆರೋಪಿತರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 967/1067**

# ACB Raid

Bengaluru, September 7 (Karnataka Information) :

A resident of Srimandal village Bidar Taluk had sought for Survey of Land at land Survey department, Tahsildar office, Bidar. Sri.Siddaraju, Licensed Surveyor, Land Survey department, Tahsildar office, Bidar had demanded a bribe amount Rs.25,000/- from the complainant to do the same.

On 06.09.2018 the officials of ACB PS Bidar have trapped & arrested Sri.Siddaraju, Licensed Surveyor, Land Survey department, Bidar while accepting bribe amount of Rs.25,000/- from the complainant. The bribe amount has been seized. The case is under Investigation says official press release.

**ಸಂಖ್ಯೆ: 968/1068**

# ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ಶಿಕ್ಷಕರ ದಿನಾಚರಣೆ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಜವಾಹರ್‌ಲಾಲ್ ನೆಹರೂ ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈಯನ್ಸ್ ವಿಜ್ಞಾನ ಸಂಸ್ಥೆಯ ಸಹಯೋಗದೊಂದಿಗೆ ಶಿಕ್ಷಕರ ದಿನಾಚರಣೆಯ ಅಂಗವಾಗಿ ವಿಜ್ಞಾನ ಮತ್ತು ಗಣಿತ ಶಿಕ್ಷಕರಿಗೆ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಸೆಪ್ಟೆಂಬರ್ 8 ರಂದು ಬೆಳಿಗ್ಗೆ 10.30 ರಿಂದ 1.00 ಗಂಟೆಯವರಗೆ ನಗರದ್ಲ ಜವಾಹರ್‌ಲಾಲ್ ನೆಹರೂ ತಾರಾಲಯದಲ್ಲಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಕಾರ್ಯಾಗಾರವನ್ನು ಕೋಲಾರದ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರಾದ ಪ್ರವೀಣ್ ಎಸ್. ಅವರು ನಡೆಸಿಕೊಡಲಿದ್ದಾರೆ.

ಈ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲು 50 ಶಿಕ್ಷಕರಿಗೆ ಮಾತ್ರ ಅವಕಾಶವಿದ್ದು, ಇದಕ್ಕಾಗಿ ಯಾವುದೇ ಶುಲ್ಕವಿರುವುದಿಲ್ಲ.

ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಶಿಕ್ಷಕರು ಮುಂಗಡ ಕಾಯ್ದಿರಿಸಿಕೊಳ್ಳಲು ಇಮೇಲ್ ಅಥವಾ ಸೆಪ್ಟೆಂಬರ್ 7 ರೊಳಗಾಗಿ ಇಮೇಲ್ id: info@taralaya.org. ಬಳಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜವಾಹರ್‌ಲಾಲ್ ನೆಹರು ತಾರಾಲಯದ ದೂರವಾಣಿ ಸಂಖ್ಯೆ 2237 9725 / 2226 6084 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ತಾರಾಲಯದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 969/1069**

# “ಗಣೇಶ ಚತುರ್ಥಿ” ಹಬ್ಬದ ಸಮಯದಲ್ಲಿ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಸೆಪ್ಟೆಂಬರ್ 13 ರಂದು ಜರುಗಲಿರುವ “ಗಣೇಶ ಚತುರ್ಥಿ” ಹಬ್ಬದ ಸಮಯದಲ್ಲಿ ಅಗ್ನಿ ಅಪಘಾತ ಹಾಗೂ ಇತರೆ ಅನಾಹುತಗಳನ್ನು ತಡೆಗಟ್ಟಲು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆ ಕೆಲವೊಂದು ಸುರಕ್ಷತಾ ಕ್ರಮಗಳನ್ನು ಪಾಲಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸುವ ಪೆಂಡಾಲ್‌ನ್ನು ಜಿಂಕ್ ಶೀಟ್ ಅಥವಾ ಇತರೆ ಅಗ್ನಿ ನಿರೋಧಕ ವಸ್ತುಗಳನ್ನು ಬಳಸಿ ನಿರ್ಮಿಸತಕ್ಕದ್ದು.

ಪೆಂಡಾಲ್‌ಗಳನ್ನು ರಸ್ತೆಗಳಲ್ಲಿ ನಿರ್ಮಿಸವುದನ್ನು ತಪ್ಪಿಸತಕ್ಕದ್ದು ಹಾಗೂ ತುರ್ತು ಪರಿಸ್ಥಿತಿ ಸಂದರ್ಭಗಳಲ್ಲಿ ಪೆಂಡಾಲ್‌ಗಳನ್ನು ತಲುಪಲು ಸೂಕ್ತ ರಸ್ತೆಯನ್ನು ವ್ಯವಸ್ಥಿಸತಕ್ಕದ್ದು.

ಪ್ರತಿಯೊಂದು ಪೆಂಡಾಲ್‌ಗೆ ಮುಂದಿನಿಂದ ಹಾಗೂ ಹಿಂದಿನಿಂದ ಪ್ರವೇಶಿಸಿಸುವ ವ್ಯವಸ್ಥೆ ಇರಬೇಕು. ಇದರಿಂದ ಅಪಘಾತ ಸಂದರ್ಭದಲ್ಲಿ ಪರಿಸ್ಥಿತಿಗನುಗುಣವಾಗಿ ರಕ್ಷಣಾ ಕಾರ್ಯಕರ್ತರು ಪೆಂಡಾಲ್‌ಗೆ ಪ್ರವೇಶಿಸಿ ಒಳಗಿದ್ದವರನ್ನು ರಕ್ಷಿಸಬಹುದು.

ವಿದ್ಯುತ್ ಸಂಪರ್ಕವನ್ನು ನುರಿತ ಕೆಲಸಗಾರರ ಮೂಲಕ ಕಲ್ಪಿಸತಕ್ಕದ್ದು ಹಾಗೂ ತೆರೆದ ವೈರ್‌ಗಳನ್ನು ಅಳವಡಿಸತಕ್ಕದ್ದಲ್ಲ.

ಪ್ರತಿಯೊಂದು ಪೆಂಡಾಲ್‌ನಲ್ಲಿ 5 ಕೆ.ಜಿ. ಸಾಮರ್ಥ್ಯದ ಅಗ್ನಿನಂದಕ, ಒಂದು 9 ಲೀಟರ್ ಸಾಮರ್ಥ್ಯದ ವಾಟರ್ ಪ್ರೆಜರ್ ಮಾದರಿ ಅಗ್ನಿನಂದಕ ಮತ್ತು 2 ಬಕೇಟುಗಳಲ್ಲಿ ಮರಳು ಹಗೂ ಎರಡು ಬಕೇಟುಗಳಲ್ಲಿ ನೀರನ್ನು ಇಟ್ಟಿರಬೇಕು.

ಪ್ರತಿಯೊಂದು ಪೆಂಡಾಲ್‌ನ ಪಕ್ಕದಲ್ಲಿ ಎರಡು ಡ್ರಮ್‌ನಲ್ಲಿಕನಿಷ್ಠ 400 ಲೀಟರ್ ನೀರನ್ನು ಶೇಖರಿಸಿಟ್ಟಿರಬೇಕು.

ಪೆಂಡಾಲ್‌ಗಳಲ್ಲಿ ಪಟಾಕಿಗಳನ್ನು ಶೇಖರಿಸಿಡಬಾರದು ಹಾಗೂ ಹತ್ತಿರದಲ್ಲಿ ಪಟಾಕಿಗಳನ್ನು ಸಿಡಿಸಲು ಅವಕಾಶ ಕಲ್ಪಿಸಬಾರದು ಹಾಗೂ ಪೆಂಡಾಲ್‌ಗಳಲ್ಲಿ ಯಾವುದೇ ರೀತಿಯ ಹೊತ್ತಿ ಉರಿಯುವ ಸಾಮಗ್ರಿಗಳನ್ನು ಶೇಕರಿಸಿಡಬಾರದು.

ಪ್ರತಿ ಪೆಂಡಾಲ್‌ನಲ್ಲಿ ಅಗ್ನಿಶಾಮಕ ಇಲಾಖೆಯ ದೂರವಾಣಿ ಸಂಖ್ಯೆ 101 ಹಾಗೂ ಸ್ಥಳೀಯ ಪೊಲೀಸ್ ಕಂಟ್ರೋಲ್ ದೂರವಾಣಿ ಸಂಖ್ಯೆ 100 ಅನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸಿಡಬೇಕು ಎಂದು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ: 970/1070**

## ಸೆಪ್ಟೆಂಬರ್ 8 ರಂದು ಶ್ರೀ ಪ್ರಸನ್ನ ವೀರಾಂಜನೇಯ ಸ್ವಾಮಿ ದೇವಾಲಯದಲ್ಲಿ ಶ್ರೀ ಸ್ವಾಮಿಗೆ 43 ನೇ ವರ್ಷದ ಬೆಣ್ಣೆ ಅಲಂಕಾರ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ಮಹಾಲಕ್ಷ್ಮೀ ಬಡಾವಣೆಯಲ್ಲಿರುವ ಶ್ರೀ ಪ್ರಸನ್ನ ವೀರಾಂಜನೇಯ ಸ್ವಾಮಿ ದೇವಾಲಯದಲ್ಲಿ ಸೆಪ್ಟೆಂಬರ್ 8 ರಂದು ಶ್ರೀ ಸ್ವಾಮಿಗೆ 43 ನೇ ವರ್ಷದ ಬೆಣ್ಣೆ ಅಲಂಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ದೇವಾಲಯವು ಕರ್ನಾಟಕ ಸರ್ಕಾರದ ಹಿಂದೂ ಧಾರ್ಮಿ ಸಂಸ್ಥೆಗಳು ಮತ್ತು ಧರ್ಮಾದಯ ದತ್ತಿಗಳ ಇಲಾಖೆಯ ಹಿರಿಯ "ಘೋಷಿತ" ಸಂಸ್ಥೆಯಾಗಿರುತ್ತದೆ.

ಅಂದು ಬೆಳಿಗ್ಗೆ 5.30 ಗಂಟೆಯಿಂದ ಸ್ವಾಮಿಗೆ ಅಭಿಷೇಕ, ಬೆಣ್ಣೆ ಅಲಂಕಾರ, 11.00 ಗಂಟೆಗೆ ಅಷ್ಟವದನ ಸೇವಾ, ಮಹಾಮಂಗಳಾರತಿ ಪೂಜೆ ನಡೆಯಲಿದ್ದು, ತದನಂತರ ಪ್ರಸಾದ ವಿನಿಯೋಗ ನಡೆಯಲಿದೆ. ಅಲ್ಲದೆ, ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಪ್ರಸನ್ನ ವೀರಾಂಜನೇಯ ಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ: 971/1071**

## ಅರ್ಹ ಅಭ್ಯರ್ಥಿಗಳ ಪಟ್ಟಿ ಅಂತರ್ಜಾಲದಲ್ಲಿ ಪ್ರಕಟ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳಲ್ಲಿನ ಗಣಿತ ಶಿಕ್ಷಕರು 100+65 (ಹೈ.ಕ) ಹುದ್ದೆಗೆ ಸಂಬಂಧಿಸಿದಂತೆ,

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ http://kpsc.kar.nic.in ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು ದಿನಾಂಕ : 19-09-2018, 20-09-2018 ಹಾಗೂ 22-09-2018 ರಂದು ನಡೆಸಲು ತೀರ್ಮಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ಅಂಚೆ ಮೂಲಕ ರವಾನಿಸಲಾಗಿರುತ್ತದೆ. ಸೂಚನಾ ಪತ್ರವು ಸರಿಯಾದ ಸಮಯದಲ್ಲಿ ತಲುಪದಿದ್ದಲ್ಲಿ, ಅರ್ಹ ಅಭ್ಯರ್ಥಿಗಳು ಪಟ್ಟಿಯ ಪ್ರಿಂಟ್ಔಟ್‌ನ್ನು ಪಡೆದು ನಿಗದಿತ ದಿನಾಂಕದಂದು ಹಾಜರಾಗಬಹುದೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 972/1072**

## ಕಚೇರಿ ಸ್ಥಳಾಂತರ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರ (ಆಡಳಿತ) ಕಚೇರಿ ಮತ್ತು ಲೆಕ್ಕ ಪರಿಶೋಧನೆ ಕಚೇರಿಗಳು ವಾಣಿಜ್ಯ ತೆರಿಗೆ ಕಾರ್ಯಾಲಯ-2, ಕೋರಮಂಗಲ, ಬೆಂಗಳೂರು ಕಟ್ಟಡದಿಂದ ನಂ 642, ಪಯೋನೀರ್ ಪ್ಲಾಜಾ, ಕೆಂಚೇನಹಳ್ಳಿ ಮುಖ್ಯರಸ್ತೆ, ರಾಜರಾಜೇಶ್ವರಿ ನಗರ, ಬೆಂಗಳೂರು -560 098 (ಖಾಸಗಿ ಕಟ್ಟಡ) ಇಲ್ಲಿ ಸ್ಥಳಾಂತರಗೊಂಡಿರುತ್ತದೆ.

ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡ ಹೊಸ ವಿಳಾಸದಲ್ಲಿ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾಗಿದೆ ಎಂದು ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ: 973/1073**

## ಸನ್ನಡತೆಯ ಆಧಾರದ ಮೇಲೆ ಬಂಧಿಗಳ ಅವಧಿ ಪೂರ್ವ ಬಿಡುಗಡೆ ಕಾರ್ಯಕ್ರಮ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಕಾರಾಗೃಹ ಇಲಾಖೆವತಿಯಿಂದ ಸೆಪ್ಟೆಂಬರ್ 9 ರಂದು ಬೆಳಿಗ್ಗೆ 11.30 ಗಂಟೆಗೆ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಬಂಧಿಗಳ ಸನ್ನಡತೆಯ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಪಾಲ್ಗೊಳ್ಳಲಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಲೋಕಸಭಾ ಸದಸ್ಯ ಡಿ.ಕೆ. ಸುರೇಶ್ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ದಕ್ಷಿಣದ ಶಾಸಕ ಎಂ. ಕೃಷ್ಣಪ್ಪ ಅವರು ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 974/1074**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಸೆ 7 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 09-09-2018** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.